20-3-25

127-0-155

**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಸಿ.ಟಿ ರವಿ ರವರು ಶೂನ್ಯವೇಳೆಯಲ್ಲಿ ಮಾನ್ಯ ಇಲಾಖಾ ಸಚಿವರ ಗಮನಕ್ಕೆತರಲು ಅನುಮತಿ ನೀಡುವ ಪ್ರಶ್ನೆಗೆ ಉತ್ತರ ಸಲ್ಲಿಸುವ ಬಗ್ಗೆ**

**ವಿಷಯ**

ಕನಿಷ್ಠ ವೇತನಕ್ಕಾಗಿ ಆಗ್ರಹಿಸಿ, ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನ ವನದಲ್ಲಿ ವಿಕಲಚೇತನರ ಪ್ರತಿಭಟನೆ" ಎಂಬ ಶಿರೋನಾಮೆ ಅಡಿ ಪ್ರಜಾವಾಣಿ ಪತ್ರಿಕೆಯಲ್ಲಿ ವರದಿ ಪ್ರಕಟವಾಗಿರುವುದನ್ನು ಪ್ರಸ್ತಾಪಿಸಲು ಬಯಸುತ್ತೇನೆ.

ತಾಲ್ಲೂಕು ಪುನರ್ವಸತಿ ಕಾರ್ಯಕರ್ತರು, ಗ್ರಾಮೀಣ ಪುನರ್ವಸತಿ ಕಾರ್ಯಕತರು ಹಾಗೂ ನಗರ ಪುನರ್ವಸತಿ ಕಾರ್ಯಕರ್ತರು ಮತ್ತು ನವ ಕರ್ನಾಟಕ ವಿಕಲಚೇತನರ ಗೌರವಧನ ಕಾರ್ಯಕರ್ತರ ಸಂಘದ ಸದಸ್ಯರು ಕೂಡಿ, ತಮ್ಮ ನಿಸ್ವಾರ್ಥ ರಹಿತ, ಸಮಾಜಪರ ಚಿಂತನೆಯ ಕೆಲಕ್ಕಾಗಿ, ಕನಿಷ್ಠ ವೇತನವನ್ನು ನೀಡುವಂತೆ ಆಗ್ರಹಿಸಿ ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದರು, ಜೊತೆಗೆ ನನಗೂ ಸಹ ಮೌಖಿಕವಾಗಿ ತಮ್ಮ ಸಮಸ್ಯೆಯ ಬಗ್ಗೆ ಸದನದಲ್ಲಿ ಸರ್ಕಾರದ ಗಮನ ಸೆಳೆಯಲು ಒತ್ತಾಯಿಸಿರುತ್ತಾರೆ.

ವೈಕಲ್ಯತೆಯನ್ನು ಮೆಟ್ಟಿ ವಿಕಲಚೇತನರು, ವಿಶೇಷಚೇತನರಾಗಿ, ಈ ಸಮಾಜದಲ್ಲಿ ಇಂಥವರಿಗೆ ಪ್ರೋತ್ಸಾಹ ರೂಪದಲ್ಲಿ ಜೀವನೋಪಾಯಕ್ಕಾಗಿ ಕನಿಷ್ಠ ವೇತನ ಕೊಡುವಬಗ್ಗೆ.

**ಉತ್ತರ**

2007-08ನೇ ಸಾಲಿನಿಂದ ಕೇಂದ್ರ ಸರ್ಕಾರದ ಎನ್.ಪಿ.ಆರ್.ಪಿ.ಡಿ. (National Programme Rehabilitation for Persons with Disability) ಯೋಜನೆಯನ್ನು ಪರಿಷ್ಕರಿಸಿ ಅಂಗವಿಕಲರ ಗ್ರಾಮೀಣ ಪುನರ್ವಸತಿ ಯೋಜನೆಯನ್ನು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಮೂಲಕ ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗುತ್ತಿದೆ. ಅದರಂತೆ ಪ್ರತಿ ಗ್ರಾಮಪಂಚಾಯಿತಿಗೆ ಒಬ್ಬರಂತೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು, ಪ್ರತಿ ತಾಲ್ಲೂಕುಗಳಿಗೆ ವಿವಿದೊದ್ದೇಶ ಕಾರ್ಯಕರ್ತರನ್ನು ಹಾಗೂ ನಗರ, ಪಟ್ಟಣ ಪಂಚಾಯಿತಿ, ಬಿ.ಬಿ.ಎಂ.ಪಿ. ವಾರ್ಡ್‌ಗಳಿಗೆ ನಗರ ಪುನರ್ವಸತಿ ಕಾರ್ಯಕರ್ತರನ್ನು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಸಂಯೋಜಕರು ಹಾಗೂ ರಾಜ್ಯ ಸಂಯೋಜಕರನ್ನು ಗೌರವಧನದ ಆಧಾರದ ಮೇಲೆ ನೇಮಕ ಮಾಡಲಾಗಿರುತ್ತದೆ.

ಎಲ್ಲಾ ಪುನರ್ವಸತಿ ಕಾರ್ಯಕರ್ತರು ವಿವಿಧ ರೀತಿಯ ವಿಕಲಚೇತನರೇ ಆಗಿದ್ದು, ಗ್ರಾಮ ಪಂಚಾಯಿತಿ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಬರುವ ವಿಕಲಚೇತನರನ್ನು ಗುರುತಿಸಿ, ಅವರ ಅವಶ್ಯಕತೆಗಳಿಗೆ ಅನುಗುಣವಾಗಿ ವಿವಿಧ ಪುನರ್ವಸತಿ ಸೌಲಭ್ಯದ ಬಗ್ಗೆ, ಮಾಹಿತಿ ಮತ್ತು ಮಾರ್ಗದರ್ಶನ ನೀಡುವುದರ ಜೊತೆಗೆ ಸರ್ಕಾರದ ವಿವಿಧ ಇಲಾಖೆಯ ಯೋಜನೆಗಳನ್ನು ವಿಕಲಚೇತನರ ಮನೆಯ ಬಾಗಿಲಿಗೆ ತಲುಪಿಸುವ ಕೆಲಸ ನಿರ್ವಹಿಸುತ್ತಿದ್ದಾರೆ.

| ಕ್ರ. ಸಂ | ಹುದ್ದೆ | ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ | ಪಾವತಿಸಲಾಗುತ್ತಿರುವ ಮಾಸಿಕ ಗೌರವಧನ |
|---|---|---|---|
| 1 | ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು (VRW) | 5565 | 9000/- |
| 2 | ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು (MRW) | 168 | 15000/- |
| 3 | ನಗರ ಪುನರ್ವಸತಿ ಕಾರ್ಯಕರ್ತರು (URW) | 437 | 9000/- |

ಅಂಗವಿಕಲರ ಗ್ರಾಮೀಣ ಪುನರ್ವಸತಿ ಯೋಜನೆಯಡಿ (ಗೌರವಧನ ಆಧಾರದ ಮೇಲೆ) ಸೇವೆಸಲ್ಲಿಸುತ್ತಿರುವ ಗ್ರಾಮೀಣ/ನಗರ ಮತ್ತು ವಿವಿದೋದ್ದೇಶ ಪುನರ್ ವಸತಿ ಕಾರ್ಯಕರ್ತರ ಕನಿಷ್ಟ ವೇತನ ಕಾಯ್ದೆಯಡಿ ಅಳವಡಿಸುವ ಸಂಬಂಧ ವಿವಿಧ ಸಂಘಟನೆಗಳು ಹಾಗೂ ಒಕ್ಕೂಟಗಳು ಮನವಿಯನ್ನು ಸಲ್ಲಿಸಿದ್ದು, ಈ ಸಂಬಂಧ ದಿನಾಂಕ:20-01-2025ರಂತೆ ಗ್ರಾಮೀಣ/ನಗರ ಮತ್ತು ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ಕಾರ್ಮಿಕ ಕಾಯ್ದೆಯಡಿ ಕನಿಷ್ಟ ವೇತನದಡಿ ತರುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

**ಸಂಖ್ಯೆ: ಮಮಇ 112 ಪಿಹೆಚ್‌ಪಿ 2025**

(ಲಕ್ಷ್ಮೀ ಆರ್. ಹೆಬ್ಬಾಳ್ಕರ್)
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ ಸಚಿವರು